**<u>ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಚಿಂತಾಮಣಿ.</u>**

**<u>ಸಿ.ಸಿ.ನಂ. 566/2020</u>**

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಸೊಣ್ಣೇಗೌಡ** | | |
| **ಗಂಡಃತಂದೆಃಹೆಸರು** | **ಲೇಟ್ ಚೊಕ್ಕೇಗೌಡ** | **ಪಿಡಬ್ಲೂಃ** | **1** |
| **ವಯಸ್ಸು** | **70** | **ಸಿಡಬ್ಲೂಃ** | **1** |
| **ಉದ್ಯೋಗಃ** | **ವ್ಯವಸಾಯ** | | |
| **ವಾಸ ಸ್ಥಳಃ** | **ಬೊಮ್ಮೆಕಲ್ಲು ಗ್ರಾಮ.** | | |

**<u>ದಿನಾಂಕ 05-06-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದಃ-</u>**

ಚಾ.ಸಾ.2 ಮತ್ತು 3 ನನ್ನ ತಮ್ಮಂದಿರು, ಆರೋಪಿಗಳ ಪರಿಚಯವಿದೆ. ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ. ನನ್ನ ಮತ್ತು ಆರೋಪಿತರ ನಡುವೆ ಗಲಾಟೆ ನಡೆದಿಲ್ಲ. ಆರೋಪಿತರು ದೊಣ್ಣೆಯಿಂದ ಮತ್ತು ಕೈಗಳಿಂದ ಹೊಡೆದಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಫ್ರಾಣಬೆದರಿಕೆಯನ್ನು ಹಾಕಿಲ್ಲ. ನಾನು ಜಮೀನಿನಲ್ಲಿ ಕೆಲಸ ಮಾಡುವಾಗ ಆಯಾ ತಪ್ಪಿ ಬಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವಾಗ ಚಿಂತಾಮಣಿ ಪೋಲೀಸರು ಬಂದು ಕೆಲವು ದಾಖಲೆಗಳನ್ನು ಸಹಿಯನ್ನು ಪಡೆದಿರುತ್ತಾರೆ.

ಪೋಲಿಸರಿಗೆ ಯಾವುದೇ ದೂರನ್ನು ಕೊಟ್ಟಿಲ್ಲ. ಸಾಕ್ಷಿಗೆ ದೂರನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ್ದು, ದೂರನ್ನು ನಿ.ಪಿ.1 ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿ.ಪಿ.1(ಎ) ಎಂದು ಗುರುತಿಸಲಾಯಿತು.

ಪಿಡಬ್ಲೂಃ 1

ನಾನು ಪೋಲಿಸರಿಗೆ ಯಾವುದೇ ಮರು ಹೇಳಿಕೆಯನ್ನು ನೀಡಿಲ್ಲ. ನ್ಯಾಯಾಲಯದ ಮುಂದಿರುವ ದೊಣ್ಣೆಯನ್ನು ನೋಡಿದರೆ ಗುರುತಿಸಲಾಗುವುದಿಲ್ಲ

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು, ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)**

**ಪಾಟೀ ಸವಾಲುಃಃ ಮಾನ್ಯ ಸ ಸ ಅ ರವರಿಂದಃ–**

ದಿ. 14.05.2020 ರಂದು ಬೆಳಿಗೆ 10.00 ಗಂಟೆ ಸುವಯದಲ್ಲಿ ಬೊಮ್ಮೆಕಲ್ಲು ಗ್ರಾಮದ 2 ನೇ ಆರೋಪಿ ತನ್ನ ಮನೆಯ ಬಳಿ ಇರುವ ಸೈಟ್ ನಲ್ಲಿ ನೀರಿನ ಸಂಪು ಕಟುತ್ತಿದ್ದು ನಾನು ಮತ್ತು ಚಾಸಾ 2 ರಿಂದ 3 ರವರು ಸ್ಥಳಕ್ಕೆ ಹೋಗಿ 2 ಆರೂೀಗೆ ಯಾಕೆ ನಮ್ಮ ಸೈಟ್ ನಲ್ಲಿ ಸಂಪು ಹಾಕುತ್ತಿದ್ದೀರಾ ಎಂದು ಕೇಳಿದ್ದಕ್ಕ 1 ರಿಂದ 3 ಆರೋಪಿತರು ಬಂದು ನಮ್ಮ ಮೇಲೆ ಜಗಳ ತೆಗೆದು ನನಗೆ ಚಾಸಾ 2 ರಿಂದ 3 ರವರಿಗೆ ಅವಾಚ್ಯ ಶಬ್ದಗಳಿಂದ ಬೈದರು ಎಂದರೆ ಸರಿಯಲ್ಲ. 1 ನೇ ಆರೋಪಿ ದೊಣ್ಣಯಿಂದ ಎಡಬಾಗದ ನನ್ನ ಬೆನ್ನಿಗೆ ಹೊಡೆದನು ಎಂದರೆ ಸರಿಯಲ್ಲ. 2 ನೇ ಆರೋಪಿ ಕೈಗಳಿಂದ ನನ್ನ ಮೈ ಕೈ ಮೇಲೆ ಹೊಡೆದು ನೊವುಂಟು ಮಾಡಿದನು ಎಂದರೆ ಸರಿಯಲ್ಲ. 3 ನೇ ಆರೋಪಿ ನನಗೆ ಪ್ರಾಣ ಬೆದರಿಕೆ ಹಾಕಿದನು ಎಂದರೆ ಸರಿಯಲ್ಲ. ಸದರಿ ವಿಚಾರವಾಗಿ ನಾನು ಪೋಲಿಸರಿಗೆ ದೂರನ್ನು ನೀಡಿರುತ್ತೇನೆಂದರೆ ಸರಿಯಲ್ಲ.

ಸದರಿ ವಿಚಾರವಾಗಿ ನಾನು ದಿನಾಂಕಃ22.05.2020 ರಂದು ಪೋಲಿಸರಿಗೆ ಮರು ಹೇಳಿಕೆಯನ್ನು ನೀಡಿರುತ್ತೇನೆಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆಯ ಅಂಶಗಳನ್ನು ಓದಿ ಹೇಳಲಾಗಿ

ಸಿಡಬ್ಲೂಃ 1

ಸಾಕ್ಷಿಯು ಅಲ್ಲಗಳೆದಿರುವುದರಿಂದ ಸಾಕ್ಷಿಯು ಪೋಲಿಸರಿಗೆ ನೀಡಿದ ಮರುಹೇಳಿಕೆಯನ್ನು ನಿ.ಪಿ.2 ಎಂದು ಗುರುತಿಸಲಾಯಿತು.

ನಿಪಿ 1 ರಿಂದ 2 ರ ಸಂಗತಿಗಳು ಗೊತ್ತಿದ್ದರು ನಾನು ಜಮೀನಿನಲ್ಲಿ ಬಿದ್ದು ಚಿಕಿತ್ಸೆ ಪಡೆದಿದ್ದೆ ಎಂದು ಆರೋಪಿತರೊಂದಿಗೆ ರಾಜಿ ಮಾಡಿಕೊಂಡಿದ್ದಕೋಸ್ಕರ ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀಸವಾಲುಃ ಶ್ರೀ.ಟಿ.ವಿ.ಎಸ್ ಆರೋಪಿ ಪರ ವಕೀಲರಿಂದಃ- ಇಲ್ಲ.**

**ಮರು ವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

ಅಪರ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಿಂತಾಮಣಿ.